(13)

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಮು.ಅ/ತಾಂ.ಮ/ಯ.ವ/ಪಿ.ಆರ್/ 191 /2017-18

ಮುಖ್ಯಅಭಿಯಂತರವರ ಕಛೇರಿ
ಯಲಹಂಕ ವಲಯ,ಬೃ.ಬೆಂ.ಮ.ಪಾ.
ಬೆಂಗಳೂರು -92
ದಿನಾಂಕ: 24.3.17

ತಾಂತ್ರಿಕ ಮಂಜೂರಾತಿ

ವಿಷಯ: Drilling of borewell and providing pump and motor in ward no-05

ಉಲ್ಲೇಖ **ಮುಖ್ಯ ಲೆಕ್ಕಾಧಿಕಾರಿ ರವರ ಕಛೇರಿ ಕಾಮಗಾರಿ ಸಂಕೇತ:** 005-17-000036

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕಾರ್ಯಪಾಲಕ ಅಭಿಯಂತರರು (ಬ್ಯಾಟರಾಯನಪುರ ವಿಭಾಗ) ರವರು 2016-17ಸಾಲಿನ ಲೋಕೋಪಯೋಗಿ ಇಲಾಖೆ ದರಪಟ್ಟಿಯಂತೆ ಪಿ-3112 ಲೆಕ್ಕಶೀರ್ಷಿಕೆಯಡಿ ಮೇಲ್ಕಂಡ ಕಾಮಗಾರಿಯನ್ನು ರೂ 100.00ಲಕ್ಷಗಳಿಗೆ ಅಂದಾಜು ಪಟ್ಟಿಯನ್ನು ತಯಾರಿಸಿ ಅಂದಾಜು ಪಟ್ಟಿಗೆ ತಾಂತ್ರಿಕ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2011-12 ದಿನಾಂಕ:02-09-2015ಲ್ಲಿ ನೀಡಿರುವ ಅಧಿಕಾರದನ್ವಯ ಸದರಿ ಕಾಮಗಾರಿಗೆ ಕೆಳಗಿನ ಷರತ್ತುಗಳನ್ವಯ ತಾಂತ್ರಿಕ ಮಂಜೂರಾತಿಯನ್ನು ನೀಡಲಾಗಿದೆ ಹಾಗೂ ತಾಂತ್ರಿಕ ಮಂಜೂರಾತಿ ಪುಸ್ತಕ ಪುಟ ಸಂಖ್ಯೆ 92-93 ಕ್ರ.ಸಂ "191" ರಲ್ಲಿ ಈ ಕೆಳಗಿನ ಷರತ್ತುಗಳಂತೆ ದಾಖಲಿಸಲಾಗಿದೆ.

ಷರತ್ತುಗಳು:

1. ಕಾಮಗಾರಿಯನ್ನು ಕರ್ನಾಟಕ ಪಾರದರ್ಶಕ ನಿಯಮಾನುಸಾರ ನಿರ್ವಹಿಸಲು ಕ್ರಮ ವಹಿಸುವುದು.
2. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History Book/Poperty register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
3. ಕೆಲಸದ ಸ್ಥಳದಿಂದ ಸಾಗಣೆ ದೂರಕ್ಕೆ ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಸಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯುವುದು.

ಮುಖ್ಯ ಅಭಿಯಂತರರು
ಯಲಹಂಕ ವಲಯ
ಬಿ.ಬಿ.ಎಂ.ಪಿ ಬೆಂಗಳೂರು-92

ಪ್ರತಿಯನ್ನು:

1. ಸಹಾಯಕ ಹಣಕಾಸು ನಿಯಂತ್ರಕರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.
   ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ.